## ಕರ್ನಾಟಕ ಸರ್ಕಾರ

ಸಂಖ್ಯೆ:RDPR 35 GPA 2024

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 23.02.2024

### ಸುತ್ತೋಲೆ

**ವಿಷಯ :** ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬರುವ ಒಳಚರಂಡಿ, ತೆರೆದ ಗುಂಡಿ, ಶೌಚಾಲಯ ಗುಂಡಿ, ಸೆಪ್ಟಿಕ್ ಟ್ಯಾಂಕ್‌ಗಳಲ್ಲಿ ಸ್ವಚ್ಛತಾ ಕಾಮಗಾರಿಗಳ ನಿರ್ವಹಣೆ ಸಂದರ್ಭದಲ್ಲಿ ಮೃತಪಟ್ಟ ಸ್ವಚ್ಛತಾಗಾರರಿಗೆ ನೀಡಲಾಗುತ್ತಿರುವ ಪರಿಹಾರ ಧನವನ್ನು ಪರಿಷ್ಕರಿಸುವ ಕುರಿತು.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 34 ಗ್ರಾಪಂಅ 2018, ದಿನಾಂಕ: 20.01.2018
2. ಮಾನ್ಯ ಸರ್ವೋಚ್ಚ ನ್ಯಾಯಾಲಯ ರಿಟ್ ಅರ್ಜಿ (ಸಿವಿಲ್) ಸಂಖ್ಯೆ: 324/2020, ದಿನಾಂಕ: 20.10.2023 ರಂದು ನೀಡಿರುವ ತೀರ್ಪು.
3. ಸರ್ಕಾರದ ಉಪ ಕಾರ್ಯದರ್ಶಿ-3, ಸಮಾಜ ಕಲ್ಯಾಣ ಇಲಾಖೆ ರವರ ಅನಧಿಕೃತ ಟಿಪ್ಪಣಿ ಸಂಖ್ಯೆ: SWD/SDC/148/2023, ದಿನಾಂಕ: 22.11.2023.

*****

ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ರಿಟ್ ಅರ್ಜಿ (ಸಿವಿಲ್) ಸಂಖ್ಯೆ: 583/2003 ರ ಪ್ರಕರಣದಲ್ಲಿ ನೀಡಿದ ತೀರ್ಪಿನಂತೆ, ಉಲ್ಲೇಖ (1) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬರುವ ಒಳಚರಂಡಿ, ತೆರೆದ ಗುಂಡಿ, ಮತ್ತು ಶೌಚಾಲಯ ಗುಂಡಿಗಳಲ್ಲಿ ಸ್ವಚ್ಛತಾ ಕಾಮಗಾರಿಗಳ ನಿರ್ವಹಣೆ ಸಂದರ್ಭದಲ್ಲಿ ಮೃತಪಟ್ಟ ಸ್ವಚ್ಛತಾಗಾರರ ಅವಲಂಬಿತರಿಗೆ ನೀಡಲಾದ ಪರಿಹಾರ ಮೊತ್ತವನ್ನು ರೂ.5.00 ಲಕ್ಷಗಳಿಂದ ರೂ.10.00 ಲಕ್ಷಗಳಿಗೆ ಪರಿಷ್ಕರಿಸಲಾಗಿತ್ತು.

ಉಲ್ಲೇಖ (2) ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ (ಸಿವಿಲ್) ಸಂಖ್ಯೆ: 324/2020 ರ ಡಾ. ಬಲರಾಮ್ ಸಿಂಗ್ v/s ಭಾರತ ಸರ್ಕಾರ ಮತ್ತು ಇತರರು ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 20.10.2023 ರಂದು ನೀಡಿದ ತೀರ್ಪಿನ ಕ್ರಮ ಸಂಖ್ಯೆ: (96) ರಲ್ಲಿನ ಉಪ ಕ್ರಮ ಸಂಖ್ಯೆ: (4) ಮತ್ತು (5) ಗಳಲ್ಲಿ ಈ ಕೆಳಕಂಡಂತೆ ನಿರ್ದೇಶನ ನೀಡಿರುತ್ತದೆ.

*(4) The court hereby directs the Union and the States to ensure that the compensation for sewer deaths is increased (given that the previous amount fixed, i.e. ₹ 10 lakhs) was made applicable from 1993. The current equivalent of that amount is Rs.30 lakhs. This shall be the amount to be paid, by the concerned agency, i.e., the union, the union territory or the states as the case may be. In otherwords, compensation for sewer deaths shall be ₹ 30 lakhs. In the event, dependents of any victim have not been paid such amount, the above amount shall be payable to them. Furthermore, this shall be the amount to be hereafter paid, as compensation.*

*(5) Likewise, in the case of sewer victims suffering disabilities, depending upon the severity of disabilities, compensation shall be disbursed. However, the minimum compensation shall not be less than ₹ 10 lakhs. If the disability is permanent, and renders the victim economically helpless, the compensation shall not be less than ₹ 20 lakhs.*

ಉಲ್ಲೇಖ (3) ರ ಸಮಾಜ ಕಲ್ಯಾಣ ಇಲಾಖೆ ಟಿಪ್ಪಣಿಯಲ್ಲಿ, ಮಾನ್ಯ ಸರ್ವೋಚ್ಛ ನ್ಯಾಯಾಲಯದ ರಿಟ್ ಅರ್ಜಿ (ಸಿವಿಲ್) ಸಂಖ್ಯೆ: 324/2020 ರಲ್ಲಿ ನೀಡಿರುವ ತೀರ್ಪಿನಂತೆ, ರಾಜ್ಯದಲ್ಲಿ ಮ್ಯಾನ್‌ಹೋಲ್, ಸೆಪ್ಟಿಕ್ ಟ್ಯಾಂಕ್, ಒಳಚರಂಡಿ ಮತ್ತು ತೆರೆದ ಚರಂಡಿಗಳಲ್ಲಿ ಕಾರ್ಯನಿರ್ವಹಿಸುವಾಗ ಮೃತಪಡುವ ಕಾರ್ಮಿಕರ ಕುಟುಂಬದ ಅವಲಂಬಿತರಿಗೆ ಪ್ರಸ್ತುತ ನೀಡಲಾಗುತ್ತಿರುವ ಪರಿಹಾರ ಧನವನ್ನು ಹೆಚ್ಚಿಸಲು ಅಗತ್ಯ ಕ್ರಮವಹಿಸುವಂತೆ ಕೋರಿರುತ್ತಾರೆ.

ಮಾನ್ಯ ಸರ್ವೋಚ್ಛ ನ್ಯಾಯಾಲಯದ ತೀರ್ಪಿನ ಅನ್ವಯ ಮತ್ತು ಸಮಾಜ ಕಲ್ಯಾಣ ಇಲಾಖೆಯು ಕೋರಿರುವಂತೆ, ರಾಜ್ಯದ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬರುವ ಒಳಚರಂಡಿ, ತೆರೆದ ಗುಂಡಿ, ಶೌಚಾಲಯ ಗುಂಡಿ (ಪಿಟ್ ಗುಂಡಿ) ಮತ್ತು ಸೆಪ್ಟಿಕ್ ಟ್ಯಾಂಕ್‌ಗಳಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ನಿಂದ ಮೃತಪಟ್ಟ ಸ್ವಚ್ಛತಾಗಾರರ ಕುಟುಂಬದ ಅವಲಂಬಿತರಿಗೆ ನೀಡಲಾಗುತ್ತಿರುವ ಪರಿಹಾರ ಮೊತ್ತವನ್ನು ರೂ.10.00 ಲಕ್ಷಗಳಿಂದ ರೂ.30.00 ಲಕ್ಷಗಳಿಗೆ (ಮೂವತ್ತು ಲಕ್ಷ ರೂಪಾಯಿಗಳು ಮಾತ್ರ) ಪರಿಷ್ಕರಿಸಲಾಗಿದೆ ಹಾಗೂ ಇಂತಹ ಸ್ವಚ್ಛತೆಯ ಸಂದರ್ಭದಲ್ಲಿ ಅಂಗವೈಕಲ್ಯಕ್ಕೆ ಒಳಗಾಗುವ ಸಂತ್ರಸ್ತರಿಗೆ, ಅಂಗವೈಕಲ್ಯಗಳ ತೀವ್ರತೆಯ ಅನುಗುಣವಾಗಿ ಕನಿಷ್ಠ ಪರಿಹಾರ ಮೊತ್ತ ರೂ. 10.00 ಲಕ್ಷಗಳಿಗೆ ಕಡಿಮೆ ಇಲ್ಲದಂತೆ ಮತ್ತು ಶಾಶ್ವತವಾಗಿ ಅಂಗವೈಕಲ್ಯತೆ ಉಂಟಾಗಿದ್ದಲ್ಲಿ ಹಾಗೂ ಸಂತ್ರಸ್ತರು ಆರ್ಥಿಕವಾಗಿ ಅಸಹಾಯಕರಾಗಿದ್ದಲ್ಲಿ ಕನಿಷ್ಠ ರೂ. 20.00 ಲಕ್ಷಗಳಿಗೆ ಕಡಿಮೆ ಇಲ್ಲದಂತೆ ಪರಿಹಾರವನ್ನು ವಿತರಿಸಲು ಸೂಚಿಸಿದೆ. ಸದರಿ ಪರಿಹಾರ ಮೊತ್ತವನ್ನು ಗ್ರಾಮ ಪಂಚಾಯತಿಗಳು ಗ್ರಾಮ ಪಂಚಾಯತಿ ನಿಧಿಯಿಂದ ಭರಿಸಿ ಪಾವತಿಸಲು ತಿಳಿಸಿದೆ.

(ಡಾ|| ಎನ್. ನೋಮೇಶ್ ಕುಮಾರ್)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

23/12/24

ಗೆ:

1. ಎಲ್ಲಾ ಆಯುಕ್ತರು/ ವ್ಯವಸ್ಥಾಪಕ ನಿರ್ದೇಶಕರುಗಳು/ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
3. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಎಲ್ಲಾ ಜಿಲ್ಲೆಗಳ ಸಮಾಜ ಕಲ್ಯಾಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ.
5. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರಧ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ. ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಯವರಿಗೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
6. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ಇಲಾಖಾ ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.